# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1009 |
| ಮಾನ್ಯ ಸದಸ್ಯರ ಹೆಸರು | ಶ್ರೀ ಸಲೀಂ ಅಹಮದ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 24/02/2023 |
| ಉತ್ತರಿಸುವ ಸಚಿವರು | ಮಾನ್ಯ ಕಾರ್ಮಿಕ ಸಚಿವರು |

| ಕ್ರ.ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ರಾಜ್ಯದಲ್ಲಿ ಕಳೆದ 5 ವರ್ಷದಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಇಲಾಖೆಯಿಂದ ನೀಡಲಾಗಿರುವ ಶೈಕ್ಷಣಿಕ ಸಹಾಯಧನ ಎಷ್ಟು; | ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಮಂಡಳಿಗಳಿಂದ ರಾಜ್ಯದಲ್ಲಿ ಕಳೆದ 5 ವರ್ಷದಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ನೀಡಲಾಗಿರುವ ಶೈಕ್ಷಣಿಕ ಸಹಾಯಧನ ಕುರಿತ ಮಾಹಿತಿಯು ಈ ಕೆಳಗಿನಂತಿದೆ. |

1) **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ** : ಈ ಮಂಡಳಿಯ ಸುಂಕ ನಿಧಿಯಿಂದ ಶೈಕ್ಷಣಿಕ ಸಹಾಯಧನ ಸೌಲಭ್ಯದಡಿ ಕಳೆದ 5 ವರ್ಷದಲ್ಲಿ ಸಹಾಯಧನ ಬಿಡುಗಡೆ ಮಾಡಿರುವ ವಿವರ.

| ಕ್ರ ಸಂ | ಶೈಕ್ಷಣಿಕ ವರ್ಷ | ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
|---|---|---|---|
| 1 | **2018-19** | 95,637 | 53,32,79,365 |
| 2 | **2019-20** | 1,25,403 | 72,47,88,917 |
| 3 | **2020-21** | 1,15,538 | 86,93,66,430 |
| 4 | **2021-22** | 3,38,738 | 4,60,76,79,730 |
| 5 | **2022-23** | 3,00,571 | 4,34,81,64,500 |
| | ಒಟ್ಟು | 9,75,887 | 11,08,32,78,942 |

2) **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (KSUWSSB)**

ಈ ಮಂಡಳಿಯಲ್ಲಿ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಅಪಘಾತದಿಂದ ನಿಧನರಾದ ಅಥವಾ ಸಂಪೂರ್ಣ ಶಾಶ್ವತ ದುರ್ಬಲತೆ ಹೊಂದಿದ ಖಾಸಗಿ

ವಾಣಿಜ್ಯ ಸಾರಿಗೆ ಕಾರ್ಮಿಕರಾದ ಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳ ಗರಿಷ್ಠ ಇಬ್ಬರು ಮಕ್ಕಳಿಗೆ 1ನೇ ತರಗತಿಯಿಂದ 12ನೇ ತರಗತಿಯವರೆಗೆ ವ್ಯಾಸಂಗಕ್ಕಾಗಿ ವಾರ್ಷಿಕ ತಲಾ ರೂ.10.000/-ಗಳ **"ಶೈಕ್ಷಣಿಕ ಧನಸಹಾಯ"** ನೀಡಲಾಗುತ್ತಿದ್ದು ಕಳೆದ 5 ವರ್ಷಗಳ ವಿವರ ಈ ಕೆಳಕಂಡತಿವೆ.

| ವರ್ಷ | ವಿದ್ಯಾರ್ಥಿಗಳ ಸಂಖ್ಯೆ | ಶೈಕ್ಷಣಿಕ ಧನಸಹಾಯದ ಮೊತ್ತ |
|---|---|---|
| 2018-19 | 149 | ರೂ.14,90,000/- |
| 2019-20 | 184 | ರೂ.18,40,000/- |
| 2020-21 | 206 | ರೂ.20,60,000/- |
| 2021-22 | 255 | ರೂ.25,50,000/- |
| 2022-23 | 211 | ರೂ.21,00,000/- |

**3) ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ (KLWB)**

ಈ ಮಂಡಳಿಯಲ್ಲಿ ಕಳೆದ 5 ವರ್ಷಗಳಲ್ಲಿ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹಧನ ಸಹಾಯ ನೀಡಲಾಗಿರುವ ವಿವರ ಈ ಕೆಳಕಂಡಂತಿವೆ:-

| ವರ್ಷ | ಧನ ಸಹಾಯ ನೀಡಲಾದ ಒಟ್ಟು ಮೊತ್ತ |
|---|---|
| 2017-18 | 7,11,40,200/- |
| 2018-19 | 8,57,34,000/- |
| 2019-20 | 10,51,98,000/- |
| 2020-21 | 6,01,48,000/- |
| 2021-22 | 4,51,76,000/- |

ಆ) ಇಲಾಖೆಗೆ ಪ್ರತಿ ವರ್ಷ ಶೈಕ್ಷಣಿಕ ಸಹಾಯಧನಕ್ಕಾಗಿ ಎಷ್ಟು ಅರ್ಜಿಗಳು ಸಲ್ಲಿಕೆಯಾಗುತ್ತಿದೆ; ಮತ್ತು ಸಹಾಯಧನದ ಆಯ್ಕೆಗೆ ಇರುವ ಮಾನದಂಡಗಳೇನು;

ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಮಂಡಳಿಗಳಿಂದ ಶೈಕ್ಷಣಿಕ ಸಹಾಯಧನಕ್ಕಾಗಿ ಬಂದ ಅರ್ಜಿಗಳು ಮತ್ತು ಸಹಾಯಧನದ ಆಯ್ಕೆಗೆ ಇರುವ ಮಾನದಂಡಗಳು ಈ ಕೆಳಗಿನಂತಿವೆ.

**1) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :**

ಕಳೆದ ಮೂರು ವರ್ಷದಲ್ಲಿ ಶೈಕ್ಷಣಿಕ ಸಹಾಯಧನ ಕೋರಿ ಮಂಡಳಿಯಲ್ಲಿ ಸ್ವೀಕೃತವಾದ ಅರ್ಜಿಗಳ ವಿವರ

| ವರ್ಷ | ಶೈಕ್ಷಣಿಕ ಸಹಾಯಧನ ಸೌಲಭ್ಯಗಳಡಿ ಸ್ವೀಕರಿಸಲಾದ ಅರ್ಜಿಗಳು |
|---|---|
| 2019-2020 | 1,37,609 |
| 2020-2021 | 1,85,837 |
| 2021-2022 | 6,38,276 |

ಮಂಡಳಿಯ ನೋಂದಾಯಿತ ಫಲಾನುಭವಿಗಳು ಅವರ ಎರಡು ಮಕ್ಕಳ ವಿದ್ಯಾಭ್ಯಾಸ ಕೋರಿ ಅರ್ಜಿ ಸಲ್ಲಿಸಲು ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ (ಉದ್ಯೋಗದ ಕ್ರಮೀಕರಣ ಮತ್ತು ಸೇವಾ ಷರತ್ತುಗಳು) ಕರ್ನಾಟಕ ನಿಯಮಗಳು, 2006 ರ ನಿಯಮ-45 ರನ್ವಯ ಈ ಕೆಳಕಂಡ ನಿಗಧಿಪಡಿಸಿದ ದಾಖಲೆಗಳನ್ನು ಪೂರೈಸಿದ ಅರ್ಜಿಗಳನ್ನು ಮಂಜೂರು ಮಾಡಲಾಗುವುದು. ನಿಯಮ 45: ಶೈಕ್ಷಣಿಕ ಸಹಾಯಧನ ಪಡೆಯಲು ಸಲ್ಲಿಸಬೇಕಾದ ದಾಖಲೆಗಳ ಚೆಕ್ ಲಿಸ್ಟ್.

- ಆನ್ ಲೈನ್‌ನಲ್ಲಿ ಅರ್ಜಿ ಸಲ್ಲಿಸುವುದು.
- ಮಂಡಳಿಯಿಂದ ನೀಡಿರುವ ಗುರುತಿನ ಚೀಟಿಯ ಪ್ರತಿ
- ಫಲಾನುಭವಿ ಹೊಂದಿರುವ ಬ್ಯಾಂಕ್ ಪಾಸ್ ಪುಸ್ತಕದ ಪ್ರತಿ.
- ಫಲಾಭವಿಯ ಮಗ / ಮಗಳು ಉತ್ತೀರ್ಣರಾಗಿರುವ ಕುರಿತು ಅಂಕಪಟ್ಟಿ ಹಾಗೂ ವ್ಯಾಸಂಗ ಮಾಡುತ್ತಿರುವ ಸಂಸ್ಥೆಯ ಮುಖ್ಯಸ್ಥರಿಂದ ವ್ಯಾಸಂಗ ಮೂಲ ಪ್ರಮಾಣ ಪತ್ರವನ್ನು ಸಲ್ಲಿಸಬೇಕು.
- ಶೈಕಣಿಕ ಸಹಾಯಧನ ಅರ್ಜಿಯನ್ನು ಶೈಕ್ಷಣಿಕ ವರ್ಷ ಪ್ರಾರಂಭವಾದ ದಿನದಿಂದ 6 ತಿಂಗಳ ಒಳಗೆ ಸಲ್ಲಿಸಬೇಕು.
- ಫಲಾನುಭವಿ ಮತ್ತು ಮಗುವಿನ ಆಧಾರ್‌ಕಾರ್ಡ್ ಪ್ರತಿ

2) <u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (KSUWSSB)</u>

ಮಂಡಳಿಯು ಜಾರಿಗೊಳಿಸುತ್ತಿರುವ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಶೈಕ್ಷಣಿಕ ಧನಸಹಾಯ ಸೌಲಭ್ಯವನ್ನು 2018-19ನೇ ಸಾಲಿನಿಂದ ಪ್ರಾರಂಭಿಸಲಾಗಿದ್ದು, ಸ್ವೀಕರಿಸಿದ ಅರ್ಜಿಗಳನ್ನು ನಿಗದಿಪಡಿಸಿದ ಮಾರ್ಗಸೂಚಿಗಳನ್ವಯ ಪರಿಶೀಲಿಸಿ, ಅರ್ಹ ವಿದ್ಯಾರ್ಥಿಗಳಿಗೆ ಶೈಕ್ಷಣಿಕ ಧನಸಹಾಯವನ್ನು ಮಂಜೂರು ಮಾಡಲಾಗುತ್ತದೆ. 2018-19ನೇ ಸಾಲಿನಲ್ಲಿ ಕನಿಷ್ಠ 149 ಅರ್ಜಿಗಳು ಹಾಗೂ 2021-22ನೇ ಸಾಲಿನಲ್ಲಿ ಗರಿಷ್ಠ 255 ಅರ್ಜಿಗಳನ್ನು ಪುರಸ್ಕರಿಸಲಾಗಿದ್ದು, ಆಯ್ಕೆಗೆ ನಿಗಧಿಪಡಿಸಿರುವ ಮಾನದಂಡಗಳು ಹಾಗೂ ಅನುಸರಿಸುತ್ತಿರುವ ಕ್ರಮಗಳು ಈ ಕೆಳಗಿನಂತಿವೆ.

**ಮಾನದಂಡಗಳು:-**

- ❖ಖಾಸಗಿ ವಾಣಿಜ್ಯ ಸಾರಿಗೆಚಾಲಕರು, ನಿರ್ವಾಹಕರು ಹಾಗೂ ಕ್ಲೀನರ್‌ಗಳು ಅಪಘಾತದಿಂದ ಶಾಶ್ವತದುರ್ಬಲತೆಅಥವಾ ಮರಣ ಹೊಂದಿದ ಪ್ರಕರಣಗಳಲ್ಲಿ ಮಂಡಳಿಯಿಂದ ಅಪಘಾತ ಪರಿಹಾರ ಸೌಲಭ್ಯ ಪಡೆದಿರಬೇಕು.
- ❖ಗರಿಷ್ಠ ಇಬ್ಬರು ಮಕ್ಕಳಿಗೆ ಮಾತ್ರ.
- ❖1ನೇ ತರಗತಿಯಿಂದ ಪದವಿ ಪೂರ್ವ/12ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರಬೇಕು.

**ಅನುಸರಿಸುತ್ತಿರುವ ಕ್ರಮಗಳು:**

- ❖ ಶೈಕ್ಷಣಿಕ ಧನ ಸಹಾಯದ ನಿಗದಿತ ಅರ್ಜಿಗಳನ್ನು ಜಿಲ್ಲಾ ಕಾರ್ಮಿಕ ಅಧಿಕಾರಿಗಳ ಮುಖಾಂತರ ಅಥವಾ ನೇರವಾಗಿ ಮಂಡಳಿಗೆ ಸಲ್ಲಿಸಬಹುದು.
- ❖ ವ್ಯಾಸಂಗ ಮಾಡುತ್ತಿರುವ ಕುರಿತು ಶಾಲೆಯ ಮುಖೋಪಾದ್ಯಾಯರಿಂದ ಪ್ರಮಾಣ ಪತ್ರ ಸಲ್ಲಿಸಬೇಕು.

  ಸದರಿ ಅರ್ಜಿಗಳನ್ನು ಸ್ಥಳೀಯ ಕಾರ್ಮಿಕ ಇಲಾಖೆಯ ಅಧಿಕಾರಿಗಳಿಂದ ಪರಿಶೀಲನೆ ನಡೆಸಿ ಸಲ್ಲಿಸಿರುವ ವರದಿಯ ಆಧಾರದ ಮೇಲೆ ಎಲ್ಲಾ ಅರ್ಹರಿಗೆ, ಶೈಕ್ಷಣಿಕ ಧನಸಹಾಯದ ಮೊತ್ತವನ್ನು ಅರ್ಜಿದಾರರ ಬ್ಯಾಂಕ್ ಖಾತೆಗೆ ನೇರವಾಗಿ ಜಮೆ ಮಾಡಲಾಗುವುದು.

**3) ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ (KLWB)**

| ವರ್ಷ | ಅರ್ಜಿಗಳ ಸಂಖ್ಯೆ |
|---|---|
| 2017–18 | 17,414 |
| 2018–19 | 21,127 |
| 2019–20 | 26,257 |
| 2020–21 | 13,729 |
| 2021–22 | 13,188 |

ಮಂಡಳಿಯಲ್ಲಿ ಜಾರಿಯಲ್ಲಿರುವ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯದ ಮಾನದಂಡಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

- ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ ಯೋಜನೆಗೆ ಮಾಸಿಕ ವೇತನ ರೂ. 35,000/- ಗಿಂತ ಮೀರಿರಬಾರದು.

| | | |
|---|---|---|
| | | **ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನ ಸಹಾಯ:**<br>• ಪ್ರೌಢಶಾಲೆ, 8 ರಿಂದ 10ನೇ ತರಗತಿವರೆಗೆ ರೂ.6,000/-<br>• ಪಿಯುಸಿ /ಡಿಪ್ಲೊಮಾ/ ಐಟಿಐ/ ಟಿಸಿಹೆಚ್ ಶಿಕ್ಷಣಕ್ಕಾಗಿ ರೂ.8,000/-,<br>• ಪದವಿ ಶಿಕ್ಷಣಕ್ಕಾಗಿ ರೂ.10,000/-,<br>• ಸ್ನಾತಕೋತ್ತರ ಶಿಕ್ಷಣಕ್ಕಾಗಿ ರೂ.12,000/-,<br>• ಇಂಜಿನೀಯರಿಂಗ್/ವೈದ್ಯಕೀಯ ಶಿಕ್ಷಣಕ್ಕಾಗಿ ರೂ.20,000/-,ಗಳ ಪ್ರೋತ್ಸಾಹ ಧನ ನೀಡಲಾಗುವುದು.<br>ಅರ್ಜಿ ಸಲ್ಲಿಸಲು ಸಾಮಾನ್ಯ ವರ್ಗದ ವಿದ್ಯಾರ್ಥಿಗಳು ಶೇ.50 ಹಾಗೂ ಪ.ಜಾ/ ಪ. ಪಂಗಡದ ವಿದ್ಯಾರ್ಥಿಗಳು ಶೇ.45 ರಷ್ಟು ಅಂಕ ಪಡೆದು ತೇರ್ಗಡೆಯಾಗಿರಬೇಕು. ಒಂದು ಕುಟುಂಬದಲ್ಲಿ ಒಬ್ಬ ವಿದ್ಯಾರ್ಥಿಗೆ ಮಾತ್ರ ಈ ಸೌಲಭ್ಯ ನೀಡಲಾಗುವುದು |
| ಇ) | 2021-2022ನೇ ಸಾಲಿನಲ್ಲಿ ಸುಮಾರು 60 ಸಾವಿರ ಅರ್ಜಿದಾರರಿಗೆ ಶೈಕ್ಷಣಿಕ ಸಹಾಯಧನ ಪಾವತಿಯಾಗಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ ಯಾವ ಕ್ರಮ ತೆಗೆದುಕೊಳ್ಳಲಾಗಿದೆ ಹಾಗೂ ಪಾವತಿ ಮಾಡದಿರಲು ಕಾರಣಗಳೇನು; | ಹೌದು,<br>1) **<u>ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ:</u>**<br>ಶೈಕ್ಷಣಿಕ ಸಹಾಯಧನಕ್ಕಾಗಿ ಇಲ್ಲಿಯವರೆಗೆ ಸೇವಸಿಂಧು ತಂತ್ರಾಂಶದ ಮೂಲಕ ಅರ್ಜಿಗಳನ್ನು ಸ್ವೀಕರಿಸಿ ವಿಲೇವಾರಿ ಮಾಡಲಾಗುತ್ತಿದ್ದು, 2021-22ನೇ ಸಾಲಿನಿಂದ ಇ-Governance ಇಲಾಖೆಯ ಎಸ್‌ಎಸ್‌ಪಿ ಪೋರ್ಟಲ್ ಮೂಲಕ ಶೈಕ್ಷಣಿಕ ಸಹಾಯಧನಕ್ಕಾಗಿ ಅರ್ಜಿ ಸಲ್ಲಿಸಲು ಫಲಾನುಭವಿಗಳಿಗೆ ಅವಕಾಶ ಕಲ್ಪಿಸಲಾಗಿರುತ್ತದೆ. ಈ ಪೋರ್ಟಲ್‌ನಲ್ಲಿ ಸ್ವೀಕೃತವಾಗಿದ್ದ ಅರ್ಜಿಗಳಲ್ಲಿ ಇಲ್ಲಿಯವರೆಗೆ **4,32,387** ಅರ್ಜಿಗಳನ್ನು ವಿಲೇವಾರಿ ಮಾಡಿ ಸಹಾಯಧನವನ್ನು ಡಿಬಿಟಿ ಮುಖಾಂತರ ಪಾವತಿಸಲಾಗಿದೆ. ಮುಂದುವರೆದು, 42,173 ಅರ್ಜಿಗಳು ವಿಲೇವಾರಿಗಾಗಿ ಬಾಕಿ ಇರುತ್ತವೆ. ಇವುಗಳನ್ನು ಪರಿಶೀಲಿಸಿ ಶೀಘ್ರವಾಗಿ ಡಿಬಿಟಿ ಮೂಲಕ ಸಹಾಯಧನ ಸಂದಾಯ ಮಾಡಲು ಈಗಾಗಲೇ ಕ್ರಮ ಕೈಗೊಳ್ಳಲಾಗುತ್ತಿದೆ.<br>2) **<u>ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ</u> (KSUWSSB)**<br>2021-22ನೇ ಸಾಲಿನಲ್ಲಿ ಈ ಮಂಡಳಿಯಲ್ಲಿ ಶೈಕ್ಷಣಿಕ ಧನಸಹಾಯ ಕೋರಿ **255** ಅರ್ಜಿಗಳು |

| | | |
|---|---|---|
| | | ಸ್ವೀಕೃತಗೊಂಡಿದ್ದು, ಮಾನದಂಡಗಳನ್ನು ಪೂರೈಸಿದ ಎಲ್ಲಾ 255 ಅರ್ಜಿಗಳನ್ನು ಮಾನ್ಯಮಾಡಿ ತಲಾ ರೂ.10000/-ಗಳಂತೆ ಒಟ್ಟು 25,50,000/-ಗಳ ಧನಸಹಾಯವನ್ನು ಮಂಜೂರು ಮಾಡಲಾಗಿದೆ.<br><br>**3) ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ (KLWB)**<br>2021-22ನೇ ಸಾಲಿನಲ್ಲಿ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಪ್ರೋತ್ಸಾಹ ಧನ ಸಹಾಯವನ್ನು ಪಾವತಿಸಲಾಗಿದೆ. |
| ಈ) | 2022-23ನೇ ಸಾಲಿನ ಶೈಕ್ಷಣಿಕ ವರ್ಷ ಪ್ರಾರಂಭವಾಗಿ ಆರು ತಿಂಗಳು ಕಳೆದರೂ ಸಹಾ ಶೈಕ್ಷಣಿಕ ಸಹಾಯಧನಕ್ಕಾಗಿ ಅರ್ಜಿಯನ್ನು ಆಹ್ವಾನಿಸದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು,<br><br>**1) ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :**<br>2022-23ನೇ ಸಾಲಿನ ಶೈಕ್ಷಣಿಕ ವರ್ಷದ ಅರ್ಜಿಗಳನ್ನು ಸೇವಾ ಸಿಂಧು ತಂತ್ರಾಂಶದಲ್ಲಿ ಸಲ್ಲಿಸಲು ದಿನಾಂಕ:13-02-2023ರಿಂದ ಅವಕಾಶ ಕಲ್ಪಿಸಲಾಗಿದೆ. ತಂತ್ರಾಂಶದಲ್ಲಿ ಸ್ವೀಕೃತವಾಗುವ ಅರ್ಜಿಗಳನ್ನು ಅರ್ಹ ಫಲಾನುಭವಿಗಳಿಗೆ ತಲುಪಿಸುವ ನಿಟ್ಟಿನಲ್ಲಿ ಅರ್ಜಿಗಳ ಹೆಚ್ಚಿನ ಪರಿಶೀಲನೆಗಾಗಿ ತಂತ್ರಾಂಶದಲ್ಲಿ ಹಿರಿಯ ಕಾರ್ಮಿಕ/ ಕಾರ್ಮಿಕ ನಿರೀಕ್ಷಕರು ಹಾಗೂ ಕಾರ್ಮಿಕ ಅಧಿಕಾರಿಗಳಿಗೆ ಅವಕಾಶ ಕಲ್ಪಿಸಿ, ಶೀಘ್ರ ವಿಲೇವಾರಿಗಾಗಿ ಮಾರ್ಪಾಡು ಮಾಡಲಾಗಿದೆ.<br><br>**2) ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (KSUWSSB)**<br>ಶೈಕ್ಷಣಿಕ ಸಹಾಯಧನ ಕೋರಿ ಆಯಾ ಶೈಕ್ಷಣಿಕ ಸಾಲಿನ ಅಂತ್ಯದೊಳಗೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದ್ದು, ಯಾವುದೇ ಕಾಲಮಿತಿಯನ್ನು ನಿಗದಿಪಡಿಸಿರುವುದಿಲ್ಲ.<br><br>**3) ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ (KLWB)**<br>2022-23ನೇ ಸಾಲಿನ ಶೈಕ್ಷಣಿಕ ವರ್ಷಕ್ಕೆ ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಯಿಂದ ಸಂಘಟಿತ ಕಾರ್ಮಿಕರ ಮಕ್ಕಳಿಗೆ ಶೈಕ್ಷಣಿಕ ಪ್ರೋತ್ಸಾಹ ಧನಸಹಾಯಕ್ಕಾಗಿ ಅಕ್ಟೋಬರ್-2022ರ ಮಾಹೆಯಿಂದ ಅರ್ಜಿಯನ್ನು ಆಹ್ವಾನಿಸಲಾಗಿದೆ. ಜನವರಿ-23 ರ ಅಂತ್ಯಕ್ಕೆ 2,284 ವಿದ್ಯಾರ್ಥಿಗಳಿಗೆ ರೂ. 1,88,88,000/- ಗಳ ಧನ ಸಹಾಯವನ್ನು ನೀಡಲಾಗಿದೆ. |

ಉ) ಕಳೆದ ಮೂರು ವರ್ಷದಿಂದ ಕಾರ್ಮಿಕ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರ ನಿಗದಿಪಡಿಸಿರುವ ಅನುದಾನವೆಷ್ಟು; ಇದರಲ್ಲಿ ಬಿಡುಗಡೆಯಾದ ಅನುದಾನವೆಷ್ಟು? (ವಿವರ ನೀಡುವುದು)

ಕಾರ್ಮಿಕ ಇಲಾಖೆಯ ಅಧೀನದಲ್ಲಿರುವ ಮಂಡಳಿಗಳಿಂದ ಕಾರ್ಮಿಕ ಮಕ್ಕಳ ಶಿಕ್ಷಣಕ್ಕಾಗಿ ಬಿಡುಗಡೆಯಾದ ಅನುದಾನದ ವಿವರವು ಈ ಕೆಳಗಿನಂತಿದೆ.

1) **ಕರ್ನಾಟಕ ಕಟ್ಟಡ ಮತ್ತು ಇತರೆ ನಿರ್ಮಾಣ ಕಾರ್ಮಿಕರ ಕಲ್ಯಾಣ ಮಂಡಳಿ :**

ಈ ಮಂಡಳಿಗೆ ಸರ್ಕಾರದಿಂದ ಯಾವುದೇ ಅನುದಾನ ಸ್ವೀಕೃತವಾಗುವುದಿಲ್ಲ. ಮಂಡಳಿಯಲ್ಲಿ ಸಂಗ್ರಹವಾಗುವ ಸುಂಕ ನಿಧಿಯನ್ನು ಮಂಡಳಿಯಲ್ಲಿ ರೂಪಿಸಿರುವ ವಿವಿಧ ರೀತಿಯ ಕಲ್ಯಾಣ ಮತ್ತು ಸಾಮಾಜಿಕ ಭದ್ರತಾ ಸೌಲಭ್ಯಗಳನ್ನು ವಿತರಿಸಲು ಬಳಸಲಾಗುತ್ತಿದೆ. ಮಂಡಳಿಯ ಸೌಲಭ್ಯಗಳು ಘಟನೋತ್ತರವಾಗಿದ್ದು, ಶೈಕ್ಷಣಿಕ ಸಹಾಯಧನ ಕೋರಿ ಅರ್ಜಿ ಸಲ್ಲಿಸುವ ಎಲ್ಲಾ ಅರ್ಹ ಫಲಾನುಭವಿಗಳಿಗೆ ಮಕ್ಕಳಿಗೆ ಸಹಾಯಧನವನ್ನು ಆನ್‌ಲೈನ್ ಮೂಲಕ ವಿತರಿಸಲು ಕ್ರಮ ವಹಿಸಲಾಗುತ್ತಿದೆ.

ಕಳೆದ ಮೂರು ವರ್ಷದಲ್ಲಿ ಸಹಾಯಧನ ಬಿಡುಗಡೆಯಾದ ವಿವರ ಈ ಕೆಳಕಂಡಂತಿದೆ:

| ಕ್ರ ಸಂ | ಶೈಕ್ಷಣಿಕ ವರ್ಷ | ಸಂಖ್ಯೆ | ಮೊತ್ತ (ರೂ.ಗಳಲ್ಲಿ) |
|---|---|---|---|
| 1 | **2020-21** | 1,15,538 | 86,93,66,430 |
| 2 | **2021-22** | 3,38,738 | 4,60,76,79,730 |
| 3 | **2022-23** | 3,00,571 | 4,34,81,64,500 |

2) **ಕರ್ನಾಟಕ ರಾಜ್ಯ ಅಸಂಘಟಿತ ಕಾರ್ಮಿಕರ ಸಾಮಾಜಿಕ ಭದ್ರತಾ ಮಂಡಳಿ (KSUWSSB)**

ಈ ಮಂಡಳಿಗೆ ಕಾರ್ಮಿಕ ಮಕ್ಕಳ ಶಿಕ್ಷಣಕ್ಕಾಗಿ ಸರ್ಕಾರವು ಪ್ರತ್ಯೇಕವಾಗಿ ಅನುದಾನವನ್ನು ಬಿಡುಗಡೆಗೊಳಿಸುತ್ತಿಲ್ಲ ಆದರೆ ಮಂಡಳಿಯು ಜಾರಿಗೊಳಿಸುತ್ತಿರುವ **"ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಅನುದಾನವನ್ನು ಹಂಚಿಕೆ ಮಾಡುತ್ತಿದ್ದು ಸದರಿ ಅನುದಾನದಿಂದ ಅರ್ಹ ಸಾರಿಗೆ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಧನಸಹಾಯವನ್ನು ಮಂಜೂರು ಮಾಡಲಾಗುತ್ತಿದೆ. ಕಳೆದ ಮೂರು ವರ್ಷಗಳಿಂದ **ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ"**ಯಡಿ ಬಿಡುಗಡೆಗೊಳಿಸಿದ ಅನುದಾನದ ವಿವರ ಈ ಕೆಳಗಿನಂತಿದೆ.

(ರೂ.ಲಕ್ಷಗಳಲ್ಲಿ)

| ಯೋಜನೆ | 2019-20 | 2020-21 | 2021-22 |
|---|---|---|---|
| ಕರ್ನಾಟಕ ರಾಜ್ಯ ಖಾಸಗಿ ವಾಣಿಜ್ಯ ಸಾರಿಗೆ ಕಾರ್ಮಿಕರ ಅಪಘಾತ ಪರಿಹಾರ ಯೋಜನೆ | 499.50 | 1.00 | 1.00 |

3) **ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿ (KLWB)**

ಕರ್ನಾಟಕ ಕಾರ್ಮಿಕ ಕಲ್ಯಾಣ ಮಂಡಳಿಗೆ ಸರ್ಕಾರದಿಂದ ಕಾರ್ಮಿಕರ ಮಕ್ಕಳ ಶಿಕ್ಷಣಕ್ಕಾಗಿ ಅನುದಾನ ಬಿಡುಗಡೆಯಾಗಿರುವುದಿಲ್ಲ. ಆದರೆ ಸರ್ಕಾರದಿಂದ ಕಲ್ಯಾಣ ಯೋಜನೆಗಳಿಗೆ ಕಳೆದ 3 ವರ್ಷಗಳಿಂದ ಅಂಶದಾನ ಬಿಡುಗಡೆಯಾಗಿರುವ ವಿವರಗಳು ಈ ಕೆಳಕಂಡಂತಿದೆ.

(ರೂ. ಕೋಟಿಗಳಲ್ಲಿ)

| ಕ್ರ.ಸಂ. | ವರ್ಷ | ಸರ್ಕಾರದಿಂದ ಬಿಡುಗಡೆಯಾದ ವಂತಿಗೆ ಮೊತ್ತ |
|---|---|---|
| 1 | 2019-20 | 7.18 |
| 2 | 2020-21 | 6.00 |
| 3 | 2021-22 | 6.00 |

ಕಾಇ 127 ಎಲ್‌ಇಟಿ 2023

*(ಅರಬೈಲ್ ಶಿವರಾಂ ಹೆಬ್ಬಾರ್)*
**ಕಾರ್ಮಿಕ ಸಚಿವರು**